ಪ್ರಕರಣಗಳನ್ನು ಒಕ್ಕಲೆಬ್ಬಿಸಲು ಕೇಂದ್ರ ಸರ್ಕಾರ ಸ್ಪಷ್ಟ ನಿರ್ದೇಶನ ನೀಡಿರುತ್ತದೆ. ಅದಲ್ಲದೆ ಮಾನ್ಯ ಸುಪ್ರೀಂ ಕೋರ್ಟ್ ಮಧ್ಯಂತರ ಆದೇಶದಲ್ಲಿ ಅರಣ್ಯ ಪ್ರದೇಶದಲ್ಲಾದ ಎಲ್ಲಾ ಅನರ್ಹ ಅನಧಿಕೃತ ಒತ್ತುವರಿಗಳನ್ನು ತೆರವುಗೊಳಿಸಲು ಎಲ್ಲಾ ರಾಜ್ಯ ಸರ್ಕಾರಗಳಿಗೆ ನಿರ್ದೇಶನ ನೀಡಿರುತ್ತದೆ. ಅದರಂತೆ ಕ್ರಮ ಕೈಗೊಳ್ಳಲಾಗುತ್ತದೆ.

ಆ) ದಿನಾಂಕ 27.4.1978ರ ಪೂರ್ವದಲ್ಲಿ 17007 ಹೆ. ಅರಣ್ಯ ಪ್ರದೇಶದಲ್ಲಿ ಒತ್ತುವರಿಯನ್ನು ಸಕ್ರಮಗೊಳಿಸಲು ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿತ್ತು. ಕೇಂದ್ರ ಸರ್ಕಾರವು ಸದರಿ ಸ್ಥಳಗಳ ಪರಿವೀಕ್ಷಣೆ ನಂತರ ಒಟ್ಟು 14848 ಹೆ. ಪ್ರದೇಶ ಒತ್ತುವರಿಯನ್ನು ಕೆಲವೊಂದು ಷರತ್ತಿಗೊಳಪಟ್ಟು ಸಕ್ರಮಗೊಳಿಸಲು ದಿನಾಂಕ: 15.5.1996 ರಲ್ಲಿ ಅನುಮೋದನೆ ನೀಡಿರುತ್ತದೆ. ಅದರಂತೆ ರಾಜ್ಯ ಸರ್ಕಾರವು ದಿನಾಂಕ: 15.5.1997 ರಲ್ಲಿ ಆದೇಶ ಹೊರಡಿಸಿ, ಸಕ್ರಮಗೊಳಿಸಲು ಸಂಬಂಧಿಸಿದ ಜಿಲ್ಲಾಧಿಕಾರಿಗಳಿಗೆ ಪಟ್ಟಾ ನೀಡುವ ಅಧಿಕಾರ ನೀಡಿರುತ್ತದೆ. ಪಟ್ಟಾ ನೀಡುವ ಕಾರ್ಯ ಪ್ರಗತಿಯಲ್ಲಿದೆ. 1978ರ ಪೂರ್ವದ ಬಿಟ್ಟು ಹೋದ ಪ್ರಕರಣಗಳನ್ನು ಮತ್ತು 1978 ರಿಂದ ದಿನಾಂಕ 24.10.1980ರವರೆಗಿನ ಪ್ರಕರಣಗಳನ್ನು ಪತ್ತೆ ಮಾಡಿ ಸಕ್ರಮಗೊಳಿಸಲು ಮಂಜೂರಾತಿಗಾಗಿ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ತಿಳಿಸಲಾಗಿದೆ.

204 (781) : ಶ್ರೀ ಹಾಲಪ್ಪ ಹೆಚ್. (ಹೊಸನಗರ) - ಮಾನ್ಯ ಉಪ ಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಶಿವಮೊಗ್ಗ ತಾಲ್ಲೂಕು ದೊಡ್ಡ ಮಟ್ಟ ಗ್ರಾಮದ ಹತ್ತಿರ 30 ಅಶ್ವ ಶಕ್ತಿಯ ನೀರಾವರಿ ಯೋಜನೆ ಕಾಮಗಾರಿ ಅಪೂರ್ಣಗೊಂಡಿರುವುದಕ್ಕೆ ಕಾರಣಗಳೇನು ;

ಆ) ನಿರ್ದಿಷ್ಟ ಅವಧಿಯಲ್ಲಿ ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಸರ್ಕಾರ ಕೈಗೊಂಡ ಕ್ರಮವೇನು ;

ಇ) ಯಾವಾಗ ಪೂರ್ಣಗೊಳಿಸಲಾಗುವುದು ?

ಶ್ರೀ ಬಿ.ಎಸ್. ಯಡಿಯೂರಪ್ಪ (ಉಪ ಮುಖ್ಯಮಂತ್ರಿಗಳು ಹಾಗೂ ಸಣ್ಣ ನೀರಾವರಿ ಸಚಿವರು)-

ಅ) ಮತ್ತು ಆ) ಈ ಯೋಜನೆಯಲ್ಲಿ ಅಂಜನಾಪುರ ಜಲಾಶಯದ ಹಿನ್ನೀರಿನಿಂದ ಪಂಪ್‌ಸೆಟ್ ಮೂಲಕ ಅಚ್ಚುಕಟ್ಟು ಪ್ರದೇಶಕ್ಕೆ ನೀರನ್ನು ಒದಗಿಸಬೇಕಾಗಿರುತ್ತದೆ. ಮಳೆಗಾಲದಲ್ಲಿ ಯೋಜನೆಯ ಪಂಪ್‌ಹೌಸ್ ಹತ್ತಿರ ಹಿನ್ನೀರು ಸುತ್ತುವರಿದಿದ್ದರಿಂದ ಸಿವಿಲ್ ಕಾಮಗಾರಿಯನ್ನು ಪೂರ್ಣಗೊಳಿಸಲು ಸಾಧ್ಯವಾಗಿರುವುದಿಲ್ಲ. ಪ್ರಸ್ತುತ ಸಿವಿಲ್ ಕಾಮಗಾರಿಯು ಪ್ರಗತಿಯಲ್ಲಿದೆ. ಅಲ್ಲದೆ ಮೆಷೀನರಿ ಪೂರೈಸಿ ಅಳವಡಿಸುವ ಕೆಲಸವನ್ನು ಸಹಾ ಗುತ್ತಿಗೆದಾರರಿಗೆ ವಹಿಸಲಾಗಿದೆ. ಪಂಪ್ ಹೌಸ್‌ಗೆ ವಿದ್ಯುತ್ ಸಂಪರ್ಕವನ್ನು 4 ಕಿ.ಮೀ. ಅರಣ್ಯ ಪ್ರದೇಶದೊಳಗಿನಿಂದ ತರಬೇಕಾಗಿದ್ದು, ಈ ಕೆಲಸವನ್ನು ಸಹಾ ಮೆಸ್ಕಾಂ ಶಿವಮೊಗ್ಗ ಇವರ ಮೇಲೆ ಮೇಲ್ವಿಚಾರಣೆಯಲ್ಲಿ ಟೆಂಡರ್ ಆಧಾರದ ಮೇಲೆ ಕೈಗೆತ್ತಿಕೊಳ್ಳಲು ಕ್ರಮ ಕೈಗೊಳ್ಳಲಾಗುತ್ತಿದೆ.

ಇ) 2007ರ ಅಂತ್ಯದೊಳಗೆ ಈ ಕಾಮಗಾರಿಯನ್ನು ಪೂರ್ಣಗೊಳಿಸಲು ಯೋಜಿಸಲಾಗಿದೆ.

206 (303) : ಶ್ರೀ ಹೊನ್ನಾಳಿ ಜಬ್ಬಾರ್ ಖಾನ್ ಹಯಾತ್ ಖಾನ್ (ಹುಬ್ಬಳ್ಳಿ) – ಮಾನ್ಯ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಹುಬ್ಬಳ್ಳಿಯ ಮಿನಿ ವಿಧಾನಸೌಧದ ಕಟ್ಟಡ ಕಟ್ಟುವುದಕ್ಕೆ ಶಂಕುಸ್ಥಾಪನೆ ನೆರವೇರಿಸಿ 3 ತಿಂಗಳಾದರೂ ಕೆಲಸ ಪ್ರಾರಂಭವಾಗದಿರುವ ವಿಷಯ ಸರ್ಕಾರದ ಗಮನಕ್ಕೆ ಬಂದಿದೆಯೇ ;

ಆ) ಬಂದಿದ್ದಲ್ಲಿ, ಈ ಮಿನಿ ವಿಧಾನಸೌಧ ಕಟ್ಟಡ ಕಟ್ಟುವುದಕ್ಕೆ ವಿಳಂಬ ನೀತಿ ಅನುಸರಿಸಲು ಕಾರಣಗಳೇನು ;

ಇ) ಈ ಮಿನಿ ವಿಧಾನಸೌಧ ಕಟ್ಟಡಕ್ಕೆ ತಗಲುವ ಅಂದಾಜು ವೆಚ್ಚ ಎಷ್ಟು ಹಾಗೂ ಸದರಿ ಕಾಮಗಾರಿಗಳ ಟೆಂಡರ್ ಪ್ರಕ್ರಿಯೆ ಪೂರ್ಣವಾಗಿದೆಯೇ ;

ಈ) ಹಾಗಿಲ್ಲದಿದ್ದಲ್ಲಿ, ಕಾರಣಗಳೇನು ?

ಶ್ರೀ ಜಗದೀಶ್ ಶೆಟ್ಟರ್ (ಕಂದಾಯ ಸಚಿವರು) –

ಅ) ಹೌದು.

ಆ) ಟೆಂಡರ್‌ಗೆ ಅನುಮೋದನೆಯನ್ನು 3.2.2007 ರಂದು ನೀಡಲಾಗಿದೆ. ಶೀಘ್ರವಾಗಿ ಕಾಮಗಾರಿಯನ್ನು ಪ್ರಾರಂಭಿಸಲಾಗುವುದು.

ಇ) ಅಂದಾಜು ವೆಚ್ಚ ರೂ.6.00 ಕೋಟಿಗಳು. ಟೆಂಡರ್ ಪ್ರಕ್ರಿಯೆ ಪೂರ್ಣವಾಗಿದೆ.